ಕರ್ನಾಟಕ ಸರ್ಕಾರ

ಸಂ:ಗ್ರಾಅಪ 16 ಗ್ರಾನೀಸ(4)2016

2ನೇ ಮಹಡಿ, 'E' Block,
K.H.B Complex, ಕಾವೇರಿ ಭವನ, ಕೆ.ಜಿ.ರಸ್ತೆ,
ಬೆಂಗಳೂರು-09, ದಿನಾಂಕ:26.04.2016

**ಸುತ್ತೋಲೆ**

ವಿಷಯ : ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಬೇಸಿಗೆ ಕಾಲದಲ್ಲಿ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ಮತ್ತು ನೈರ್ಮಲ್ಯ ಕಾಪಾಡಲು ಕೈಗೊಳ್ಳಬೇಕಾಗಿರುವ ಕ್ರಮಗಳ ಕುರಿತು.

ಉಲ್ಲೇಖ :
1. ದಿನಾಂಕ:22.02.2016ರಂದು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭಾ ನಡವಳಿ.
2. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 15 ಗ್ರಾನೀಸ (3) 09 ದಿನಾಂಕ:23.03.2009.
3. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 67 ಗ್ರಾನೀಸ (4) 10 ದಿನಾಂಕ:6/8.10.2010.
4. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 67 ಗ್ರಾನೀಸ (4) 10 ದಿನಾಂಕ:05.02.2011.
5. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 79 ಗ್ರಾನೀಸ (4) 13 ದಿನಾಂಕ:22.04.2013.
6. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 07 ಗ್ರಾನೀಸ (4) 14 ದಿನಾಂಕ:07.01.2014.
7. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 07 ಗ್ರಾನೀಸ (4) 14 ದಿನಾಂಕ:28.04.2014.
8. ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪ 16 ಗ್ರಾನೀಸ(4) 2016, ದಿನಾಂಕ:23.02.2016.

-----

ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಉಲ್ಲೇಖ (1)ರ ಸಭಾ ನಡವಳಿಗನುಗುಣವಾಗಿ ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಬೇಸಿಗೆ ಕಾಲದಲ್ಲಿ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ಮತ್ತು ನೈರ್ಮಲ್ಯ ಕಾಪಾಡಲು ಈ ಕೆಳಕಂಡ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ನಿರ್ದೇಶಿಸಲಾಗಿದೆ.

- ಜಿಲ್ಲಾ ಮಟ್ಟದಲ್ಲಿ ಕುಡಿಯುವ ನೀರಿನ ಸಮರ್ಪಕ ವ್ಯವಸ್ಥೆಗಾಗಿ ಮತ್ತು ಈ ಸಂಬಂಧದ ದೂರುಗಳನ್ನು ಸ್ವೀಕರಿಸಿ ಪರಿಹರಿಸಲು ಒಬ್ಬ ಜವಾಬ್ದಾರಿಯುತ ಅಧಿಕಾರಿಯ ಉಸ್ತುವಾರಿಯಲ್ಲಿ ಒಂದು ನಿಯಂತ್ರಣ ಕೊಠಡಿ (ದೂರು ಸ್ವೀಕೃತಿ ಕೇಂದ್ರ)ಯನ್ನು ನಿಗಧಿತ ದೂರವಾಣಿ ಸಂಖ್ಯೆಯೊಂದಿಗೆ ಸೃಜಿಸಿ ಜಿಲ್ಲೆ / ತಾಲ್ಲೂಕು ವ್ಯಾಪ್ತಿಯ ಗ್ರಾಮೀಣ ಪ್ರದೇಶಗಳಲ್ಲಿ ಪ್ರಚುರಪಡಿಸತಕ್ಕದ್ದು.

- ಅದೇ ರೀತಿಯಲ್ಲಿ ತಾಲ್ಲೂಕು ಮಟ್ಟದಲ್ಲಿಯೂ ಸಹ ಕುಡಿಯುವ ನೀರಿನ ಸಮರ್ಪಕ ವ್ಯವಸ್ಥೆಗಾಗಿ ಮತ್ತು ಈ ಸಂಬಂಧದ ದೂರುಗಳನ್ನು ಸ್ವೀಕರಿಸಿ ಪರಿಹರಿಸಲು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿರವರ ಉಸ್ತುವಾರಿಯಲ್ಲಿ ಒಂದು ನಿಯಂತ್ರಣ ಕೊಠಡಿ (ದೂರು ಸ್ವೀಕೃತಿ ಕೇಂದ್ರ)ಯನ್ನು ನಿಗಧಿತ ದೂರವಾಣಿ ಸಂಖ್ಯೆಯೊಂದಿಗೆ ಸೃಜಿಸಿ ತಾಲ್ಲೂಕು ವ್ಯಾಪ್ತಿಯ ಗ್ರಾಮೀಣ ಪ್ರದೇಶಗಳಲ್ಲಿ ಪ್ರಚುರಪಡಿಸತಕ್ಕದ್ದು.

- ಜಿಲ್ಲಾ ಮಟ್ಟದ ಹಾಗೂ ತಾಲ್ಲೂಕು ಮಟ್ಟದ ನಿಯಂತ್ರಣ ಕೊಠಡಿ(ದೂರು ಸ್ವೀಕೃತಿ ಕೇಂದ್ರ)ಗಳನ್ನು ಪ್ರತಿನಿತ್ಯ ಬೆಳಿಗ್ಗೆ 8 ಗಂಟೆಯಿಂದ ಸಂಜೆ 6 ಗಂಟೆವರೆಗೆ ಕಾರ್ಯನಿರ್ವಹಿಸಲು ಮತ್ತು ದೂರುಗಳನ್ನು ದಾಖಲಿಸಿಕೊಂಡು ಅಗತ್ಯ ಕ್ರಮವಹಿಸಲು ಸಿಬ್ಬಂದಿಯನ್ನು ನಿಯೋಜಿಸತಕ್ಕದ್ದು.

- ಈ ರೀತಿ ಸೃಜಿಸಲಾದ ಜಿಲ್ಲಾ ಮಟ್ಟದ ಹಾಗೂ ತಾಲ್ಲೂಕು ಮಟ್ಟದ ನಿಯಂತ್ರಣ ಕೊಠಡಿ(ದೂರು ಸ್ವೀಕೃತಿ ಕೇಂದ್ರ)ಗಳ ಮಾಹಿತಿ / ವಿವರಗಳನ್ನು ದಿನಾಂಕ:30.04.2016ರೊಳಗೆ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಮತ್ತು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

- ಮೇಲ್ಕಂಡ ನಿಯಂತ್ರಣ ಕೊಠಡಿ(ದೂರು ಸ್ವೀಕೃತಿ ಕೇಂದ್ರ)ಗಳಲ್ಲಿ ಸ್ವೀಕೃತಗೊಳ್ಳುವ ದೂರುಗಳ ಕುರಿತು 8 ಗಂಟೆಗಳ ಕಾಲಾವಧಿಯೊಳಗೆ ಕೇಂದ್ರಿಕೃತ ಪ್ರಯತ್ನ (Focussed Effort)ದೊಂದಿಗೆ ಪರಿಹರಿಸಬೇಕು. ದಾಖಲಾಗುವ ದೂರು / ಮಾಹಿತಿ / ಅಹವಾಲುಗಳ ಮೇಲೆ ಶೀಘ್ರವಾಗಿ ನಿಗಧಿತ ಅವಧಿಯೊಳಗೆ ಅಗತ್ಯ ಕ್ರಮವಹಿಸಿ, ಕೈಗೊಂಡ ಕ್ರಮದ ಕುರಿತು ಅನುಪಾಲನಾ ವರದಿಯನ್ನು **ವಾರಕ್ಕೊಮ್ಮೆ (ಪ್ರತಿ ಶುಕ್ರವಾರ)** ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಮತ್ತು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

- ತೀವ್ರ ಕುಡಿಯುವ ನೀರಿನ ಸಮಸ್ಯೆಯಿರುವ ಗ್ರಾಮ / ಜನವಸತಿಗಳಿಗೆ ಸಂಬಂಧಪಟ್ಟ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಕೂಡಲೇ ಟ್ಯಾಂಕರ್ ಮುಖೇನ ಶುದ್ಧ ಕುಡಿಯುವ ನೀರಿನ ಪೂರೈಕೆ ಮಾಡಲು ಕ್ರಮವಹಿಸತಕ್ಕದ್ದು. ಈ ಸಂಬಂಧ. ಗ್ರಾಮ ಪಂಚಾಯಿತಿಯ ಅಭಿವೃದ್ಧಿ ಅಧಿಕಾರಿಗಳು ಉಸ್ತುವಾರಿ ನಿರ್ವಹಿಸತಕ್ಕದ್ದು. ನಂತರ ಈ ಸಂಬಂಧದ ವೆಚ್ಚಗಳನ್ನು ಜಿಲ್ಲಾಧಿಕಾರಿಗಳಿಂದ ಹಿಂಪಡೆಯಲು ಸೂಕ್ತ ಕ್ರಮ ಕೈಗೊಳ್ಳತಕ್ಕದ್ದು. ಯಾವುದೇ ಕಾರಣಕ್ಕೂ ಕುಡಿಯುವ ನೀರಿನ ವ್ಯವಸ್ಥೆಗೆ ತೊಂದರೆಯಾಗದಂತೆ ಎಲ್ಲಾ ರೀತಿಯ ಮುಂಜಾಗ್ರತಾ ಕ್ರಮವಹಿಸತಕ್ಕದ್ದು.

- ಟ್ಯಾಂಕರ್ ಮುಖೇನ ಕುಡಿಯುವ ನೀರು ಸರಬರಾಜು ಮಾಡಿದಲ್ಲಿ ಯಾವುದೇ ರೀತಿಯ ದೂರುಗಳಿಗೆ ಆಸ್ಪದ ನೀಡದಂತೆ ಅಗತ್ಯ ಮುಂಜಾಗ್ರತೆಯನ್ನು ವಹಿಸತಕ್ಕದ್ದು. ಪಂಚಾಯತ್ ಅಭಿವೃದ್ಧಿ ಅಧಿಕಾರಿ / ಗ್ರಾಮ ಲೆಕ್ಕಿಗರು ಮತ್ತು ಗ್ರಾಮ ಮಟ್ಟದ ನೀರು ಮತ್ತು ನೈರ್ಮಲ್ಯ ಸಮಿತಿಯ ಅಧ್ಯಕ್ಷರು / ಸದಸ್ಯರಿಂದ ದೃಢೀಕರಣ ಪಡೆದ ನಂತರವೇ ಟ್ಯಾಂಕರ್‌ಗಳ ಬಿಲ್ ಪಾವತಿ ಮಾಡಲು ಕ್ರಮವಹಿಸಬೇಕು ಹಾಗೂ ಟ್ಯಾಂಕರ್ ಮೂಲಕ ಸರಬರಾಜು ಮಾಡುವ ನೀರು ಕುಡಿಯಲು ಯೋಗ್ಯವಾಗಿರುವುದನ್ನು ಖಾತ್ರಿಪಡಿಸಿಕೊಂಡ ನಂತರವೇ ಸರಬರಾಜು ಮಾಡತಕ್ಕದ್ದು.

- ಸ್ಥಳೀಯ ಅವಶ್ಯಕತೆಯನುಸಾರ ಅಗತ್ಯವಿದ್ದಲ್ಲಿ ರಾಜ್ಯ ವಿಪತ್ತು ನಿರ್ವಹಣಾ ಮಾರ್ಗಸೂಚಿಗಳನ್ವಯ ಮಾಸಿಕ ದರ ನೀಡಿ ಖಾಸಗಿ ಬೋರ್‌ವೆಲ್‌ನಿಂದ ನೀರು ಪಡೆಯಲು CEO / ZP ಸ್ಥಳೀಯವಾಗಿ ನಿರ್ಧರಿಸಬಹುದು.

- ತುರ್ತಾಗಿ ಕುಡಿಯುವ ನೀರಿನ ಸಮಸ್ಯೆಯನ್ನು ಪರಿಹರಿಸಲು ಸ್ಥಳೀಯ ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿ, ತಹಶೀಲ್ದಾರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಮತ್ತು ಗ್ರಾಮ ಲೆಕ್ಕಿಗರು ಸಮನ್ವಯ ಸಾಧಿಸಿ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳತಕ್ಕದ್ದು.

- ಯಾವುದೇ ಮಾಧ್ಯಮಗಳಲ್ಲಿ (Electronic Media and Print media) ಕುಡಿಯುವ ನೀರಿನ ಸಮಸ್ಯೆ ಕುರಿತ ಸುದ್ದಿಗಳನ್ನು ಪ್ರತಿ ನಿತ್ಯ ಗಮನಿಸಿ ತಕ್ಷಣವೇ ಕಾರ್ಯಪ್ರವೃತ್ತರಾಗಿ ಅಗತ್ಯ ಜರೂರು ಕ್ರಮ ಕೈಗೊಂಡು ಸಮಸ್ಯೆಯನ್ನು ಪರಿಹರಿಸತಕ್ಕದ್ದು.

3

- ಕುಡಿಯುವ ನೀರಿನ ಸಂಗ್ರಹಾರ(ಸಿಸ್ಟ್ರನ್ ಮತ್ತು ಓವರ್ ಹೆಡ್ ಟ್ಯಾಂಕ್)ಗಳನ್ನು ನಿಯಮಿತವಾಗಿ ಶುದ್ಧೀಕರಿಸಲು ಮತ್ತು ಸುತ್ತಮುತ್ತಲಿನ ಪ್ರದೇಶಗಳನ್ನು ಸ್ವಚ್ಛವಾಗಿರಿಸಲು ಸಂಬಂಧಪಟ್ಟ ಗ್ರಾಮ ಪಂಚಾಯಿತಿಗಳಿಗೆ ಸೂಕ್ತ ನಿರ್ದೇಶನಗಳನ್ನು ನೀಡುವುದು.

- ಮೇಲ್ಕಂಡ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜನಪ್ರತಿನಿಧಿಗಳಾದ ಶಾಸಕರು / ಜಿಲ್ಲಾ ಪಂಚಾಯತ್ ಸದಸ್ಯರು / ತಾಲ್ಲೂಕು ಪಂಚಾಯತ್ ಸದಸ್ಯರು / ಹಿರಿಯ ಅಧಿಕಾರಿಗಳು / ಕುಡಿಯುವ ನೀರಿನ ಬಳಕೆದಾರರು ಹಾಗೂ ಗ್ರಾಮ ಮಟ್ಟದ ನೀರು ನೈರ್ಮಲ್ಯ ಸಮಿತಿಯವರು ಪ್ರತಿವಾರ ಸಭೆ ನಡೆಸಿ, ಕುಡಿಯುವ ನೀರು ಪೂರೈಕೆ ಮತ್ತು ನೈರ್ಮಲ್ಯ ಸಂಬಂಧ ವಸ್ತುಸ್ಥಿತಿ ಅವಲೋಕಿಸಿ, ಸ್ಥಳೀಯ ಅಗತ್ಯತೆಯನ್ವಯ ಸೂಕ್ತ ಕ್ರಮ ಕೈಗೊಳ್ಳಬೇಕು ಮತ್ತು ಕೈಗೊಂಡ ಕ್ರಮಗಳ ಕುರಿತು ಪ್ರತಿ ಶುಕ್ರವಾರ ಅನುಪಾಲನಾ ವರದಿಯನ್ನು ಸರ್ಕಾರಕ್ಕೆ ಇ-ಮೇಲ್ ಮುಖೇನ ಕಳುಹಿಸಬೇಕು.

- ರಾಜ್ಯಮಟ್ಟದಲ್ಲಿ ಕುಡಿಯುವ ನೀರಿನ ಸಮಸ್ಯೆಗಳ ಕುರಿತು ಪರಿಶೀಲಿಸಿ, ಅಗತ್ಯ ಕ್ರಮವಹಿಸಲು ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆರವರನ್ನು ನೋಡಲ್ ಅಧಿಕಾರಿಗಳನ್ನಾಗಿ ನೇಮಿಸಲಾಗಿದ್ದು, ಅವರ ಹೆಸರು ಮತ್ತು ದೂರವಾಣಿ ಸಂಖ್ಯೆ ಈ ಕೆಳಕಂಡಂತಿರುತ್ತದೆ.
  **ಹೆಸರು: ಶ್ರೀ ಎಚ್.ಎಸ್. ಪ್ರಕಾಶ್ ಕುಮಾರ್, ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ. ದೂರವಾಣಿ ಸಂಖ್ಯೆ:22533700 / 701, ಮೊಬೈಲ್ ಸಂಖ್ಯೆ:9449039016, ಇ-ಮೇಲ್:cerws14@gmail.com**

**(ಎಂ. ಮಂಜುನಾಥ ನಾಯಕ್)** 26/4/16
ಆಯುಕ್ತರು ಹಾಗೂ ಸರ್ಕಾರದ ಪದನಿಮಿತ್ತ ಅಪರ ಕಾರ್ಯದರ್ಶಿ,
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.

**ಇವರಿಗೆ:**

1. ರಾಜ್ಯದ ಎಲ್ಲಾ (30) ಜಿಲ್ಲಾ ಪಂಚಾಯತ್‌ಗಳ ಅಧ್ಯಕ್ಷರುಗಳು ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ರಾಜ್ಯದ ಎಲ್ಲಾ (30) ಜಿಲ್ಲೆಗಳ ಜಿಲ್ಲಾಧಿಕಾರಿಗಳು.
3. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು.
4. ರಾಜ್ಯದ ಎಲ್ಲಾ (4) ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತಗಳು.
5. ರಾಜ್ಯದ ಎಲ್ಲಾ (30) ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳು.
6. ರಾಜ್ಯದ ಎಲ್ಲಾ (176) ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳು.

**ಪ್ರತಿಯನ್ನು:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದಶಿಗಳು ಮತ್ತು ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿಗಳು ಹಾಗೂ ಗ್ರಾಅಪಂ.ರಾಜ್ ಇಲಾಖೆಯ ಎಲ್ಲಾ ನಿರ್ದೇಶಕರುಗಳು, ಆಂತರಿಕ ಆರ್ಥಿಕ ಸಲಹೆಗಾರರು ಇವರ ಆಪ್ತ ಕಾರ್ಯದರ್ಶಿಗಳು / ಆಪ್ತ ಸಹಾಯಕರುಗಳು.
4. ಆಯುಕ್ತರು ಮತ್ತು ಸರ್ಕಾರದ ಪದನಿಮಿತ್ತ ಅಪರ ಕಾರ್ಯದರ್ಶಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು-09ರವರ ಆಪ್ತ ಕಾರ್ಯದರ್ಶಿಗಳು.
5. ನಿರ್ದೇಶಕರು, SIRD, ಗ್ರಾಅಪಂ.ರಾಜ್ ಇಲಾಖೆ, ಮೈಸೂರು.
6. ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಅಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
7. ಹೆಚ್ಚುವರಿ ಪ್ರತಿ.